C.Misc. 7/2021     ಆರ್ ಡಬ್ಲ್ಯೂ-1

ದಿನಾಂಕಃ 18.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲು: ಅರ್ಜಿದಾರರ ಪರ ಶ್ರೀ ಕೆ.ಎಂ.ಪಿ. ವಕೀಲರಿಂದ:**

'ಬಿ' ವರದಿಗೆ ಸಂಬಂಧಿಸಿದಂತೆ ನಾನು ಎಲ್ಲಾ ದಾಖಲಾತಿಗಳನ್ನು ಪಡೆದುಕೊಂಡಿರುತ್ತೇನೆ. 'ಬಿ' ವರದಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವ ಪೂರ್ವದಲ್ಲಿ ವಾದಿಯವರಿಗೆ ಪೋಲಿಸರು ನೋಟೀಸು ನೀಡಿದ ಬಗ್ಗೆ ಸದರಿ ದಾಖಲಾತಿಗಳಲ್ಲಿ ಇರುವ ಬಗ್ಗೆ ನಾನು ನೋಡಿರುವುದಿಲ್ಲ. ಪೋಲಿಸರು ನ್ಯಾಯಾಲಯಕ್ಕೆ 'ಬಿ' ವರದಿಯನ್ನು ಸಲ್ಲಿಸಿರುವ ಬಗ್ಗೆ ನಾನು ದಾಖಲಾತಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ದಾಖಲಾತಿಯನ್ನು ನಾನು ನನ್ನ ವಕೀಲರಿಗೆ ನೀಡಿರುತ್ತೇನೆ. 'ಬಿ' ವರದಿಯನ್ನು ಸಲ್ಲಿಸಿದ ನಂತರ ಆಗಿರುವ ನಡವಳಿಕೆಯ ಬಗ್ಗೆ ನಾನು ಯಾವುದೇ ದಾಖಲಾತಿಯನ್ನು ಪಡೆದುಕೊಂಡಿರುವುದಿಲ್ಲ. ನಾನು ಪೋಲಿಸರಿಗೆ ನನ್ನ ಪ್ರಭಾವ ಬೀರಿ ವರದಿಯನ್ನು ಸಲ್ಲಿಸುವಂತೆ ಹೇಳಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಉಪಯೋಗವಾಗುವಂತೆ ಪೋಲಿಸರಿಂದ ಪಡೆದುಕೊಂಡ ದಾಖಲಾತಿಗಳನ್ನು ಈ ಪ್ರಕರಣದಲ್ಲಿ ಹಾಜರುಪಡಿಸಿ ನಾನು ಸುಳ್ಳು ಪ್ರತಿಪಾದಿಸುತ್ತಿರುತ್ತೇನೆ ಎಂದರೆ ಸರಿಯಲ್ಲ. ನಾನು ನ್ಯಾಯಾಲಯದ ಆದೇಶವನ್ನು ಉಲ್ಲಂಘನೆ ಮಾಡಿದ್ದರೂ ಸಹಾ ಅದರಿಂದ ತಪ್ಪಿಸಿಕೊಳ್ಳುವ ಕಾರಣದಿಂದ ಪೋಲಿಸರಿಂದ 'ಬಿ' ವರದಿಯನ್ನು ಸಲ್ಲಿಸಿ ಸುಳ್ಳು ದಾಖಾಲತಿಯನ್ನು ಹಾಜರುಪಡಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.